ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ದಿ: 17.01.2005 ಹಾಗೂ ದಿ: 22.02.2005 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಅಧ್ಯಕ್ಷತೆಯಲ್ಲಿ ನಡೆದ ಅಧಿಕಾರಯುತ ಸಮಿತಿಯ ಸಭೆಯ ತೀರ್ಮಾನದಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ 1233 'ಡಿ'–ಗ್ರೂಪ್ ಹುದ್ದೆಗಳಿಗೆ ಬಾಹ್ಯ ಮೂಲದಿಂದ ಭರ್ತಿ ಮಾಡಿಕೊಳ್ಳಲು ಸರ್ಕಾರ ಅನುಮತಿ ನೀಡಿದೆ.

ಆ) ಇಲ್ಲ.

ಗ್ರಾಮ ಪಂಚಾಯತಿ ಚುನಾವಣೆಯ ಅಧಿಸೂಚನೆ

344 (718) ಶ್ರೀ ಶಿವಶಂಕರ ರೆಡ್ಡಿ ಎನ್. ಹೆಚ್. (ಗೌರಿಬಿದನೂರ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮ ಪಂಚಾಯತಿ ಸದಸ್ಯರ ಅವಧಿಯು ಮುಗಿದಿದ್ದು ಮಾರ್ಚ್‌ನಲ್ಲಿ ಚುನಾವಣೆ ನಡೆಸಬೇಕಾಗಿದ್ದು ಯಾವಾಗ : ಅಧಿಸೂಚನೆ ಹೊರಡಿಸಲಾಗುವುದು;

ಆ) ಯಾವಾಗ ಚುನಾವಣೆಯನ್ನು ನಡೆಸಲಾಗುವುದು?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು) :

ಅ) ಹಾಲಿ ಇರುವ ಗ್ರಾಮ ಪಂಚಾಯತಿಗಳ ಅವಧಿಯು 2010 ಮಾರ್ಚಿ ಕೊನೆಯವಾರದಲ್ಲಿ ಮತ್ತು ಏಪ್ರಿಲ್ ಮಾಹೆಯಲ್ಲಿ ಮುಕ್ತಾಯವಾಗಲಿದೆ. ಚುನಾವಣೆಯನ್ನು ನಡೆಸಲು ಈಗಾಗಲೇ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಪೂರ್ವಸಿದ್ಧತೆಗಳನ್ನು ಮಾಡಿಕೊಳ್ಳಲು ಸೂಚನೆಗಳನ್ನು ನೀಡಲಾಗಿದೆ.

2010 ರ ಏಪ್ರಿಲ್/ಮೇ ಮಾಹೆಯಲ್ಲಿ ಗ್ರಾಮ ಪಂಚಾಯತಿಗಳಿಗೆ ಚುನಾವಣೆಯನ್ನು ನಡೆಸಲು ಸಕಲ ಸಿದ್ಧತೆಗಳನ್ನು ಮಾಡಿಕೊಂಡಿರುವುದಾಗಿದ್ದು ರಾಜ್ಯ ಚುನಾವಣಾ ಆಯೋಗ ತಿಳಿಸಿದ್ದು, ಚುನಾವಣಾ ವೇಳಾಪಟ್ಟಿಯನ್ನು ಆಯೋಗವೇ ಹೊರಡಿಸುತ್ತದೆ.